ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/12/ಜೇಪಪ/ಬಸ್ಥಾವಿ/2017-18/ಭಾಗ-2

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 7.09.2018.

**ಚಾಲನಾ ಆದೇಶ**

ವಿಷಯ : ಸಿವಿಲ್ ಅಪೀಲ್ ಸಂಖ್ಯೆ : 2368/2011- ಬಿ.ಕೆ. ಪವಿತ್ರ ಮತ್ತು ಇತರರ ವಿರುದ್ಧ ಯೂನಿಯನ್ ಆಫ್ ಇಂಡಿಯಾ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿರುವ ತೀರ್ಪಿನ ಸಂಬಂಧ ಸುತ್ತೋಲೆಗಳನ್ನು ಹೊರಡಿಸುವ ಬಗ್ಗೆ.

ಉಲ್ಲೇಖ :
1. ಸರ್ಕಾರದ ದಿನಾಂಕ : 08.08.2018ರ ಸಂಖ್ಯೆ : ಸಿಆಸುಇ 73 ಎಸ್‌ಆರ್‌ಎಸ್ 2018ರ ಆದೇಶ.
2. ಸರ್ಕಾರದ ದಿನಾಂಕ : 01.09.2018ರ ಸಂಖ್ಯೆ : ಸಿಆಸುಇ 277 ಸೇನೆನಿ 2018ರ ಸುತ್ತೋಲೆ.
3. ಸರ್ಕಾರದ ದಿನಾಂಕ : 05.09.2018ರ ಸಂಖ್ಯೆ : ಸಿಆಸುಇ 73 ಎಸ್‌ಆರ್‌ಎಸ್ 2018ರ ಸುತ್ತೋಲೆ.

** ** **

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಹಾಗೂ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಇವರಿಂದ ಸ್ವೀಕೃತವಾಗಿರುವ ಉಲ್ಲೇಖಿತ ಆದೇಶ/ಸುತ್ತೋಲೆಯ ಪ್ರತಿಗಳನ್ನು ಈ ಚಾಲನಾ ಆದೇಶದೊಂದಿಗೆ ಲಗತ್ತಿಸಿ ಈ ಕೆಳಕಂಡವರ ಮಾಹಿತಿ ಹಾಗೂ ಅಗತ್ಯ ತುರ್ತು ಕ್ರಮಕ್ಕಾಗಿ ಕಳುಹಿಸಿಕೊಡಲಾಗಿದೆ.

Sd/-
**ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು**

**ಇವರಿಗೆ :**

1. **ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು** – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. **ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ, ಕಲಬುರಗಿ** – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

**ಆಂತರಿಕ :**

1. ಎಲ್ಲಾ ಅಧಿಕಾರಿಗಳ ಆಪ್ತ ಸಹಾಯಕರುಗಳು, ಕೇಂದ್ರ ಕಛೇರಿ, ಬೆಂಗಳೂರು – ಮಾಹಿತಿಗಾಗಿ.
2. ಮ್ಯಾನೇಜರ್/ಅಧೀಕ್ಷಕರು, ಸೇವಾ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಮಾಹಿತಿ ಹಾಗೂ ಸರ್ಕಾರದ ಸುತ್ತೋಲೆಯಲ್ಲಿನ ಅಂಶಗಳಿಗೆ ಸಂಬಂಧಿಸಿದಂತೆ ಅಗತ್ಯ ಕ್ರಮಕ್ಕಾಗಿ.
3. ಮ್ಯಾನೇಜರ್/ಅಧೀಕ್ಷಕರು, ಪಿಂಚಣಿ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಮಾಹಿತಿ ಹಾಗೂ ಸರ್ಕಾರದ ಸುತ್ತೋಲೆಯಲ್ಲಿನ ಅಂಶಗಳಿಗೆ ಸಂಬಂಧಿಸಿದಂತೆ ಅಗತ್ಯ ಕ್ರಮಕ್ಕಾಗಿ.
4. ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
5. ಕಛೇರಿ ಪ್ರತಿ.

*DCE-12-GRADATION-2017-18-Part-2*

7/9/18

ಕಾಲೇಜು ಶಿಕ್ಷಣ ಆಯುಕ್ತರ
ಆಪ್ತ ಶಾಖೆ
ಸಂಖ್ಯೆ 83
ದಿನಾಂಕ 21 AUG 2018

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಬಿ.ಕೆ. ಪವಿತ್ರ ಮತ್ತಿತರರು ಪ್ರಕರಣದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿರುವ ತೀರ್ಪಿನನ್ವಯ ರಾಜ್ಯದ ಎಲ್ಲಾ ಇಲಾಖೆಯ ಎಲ್ಲಾ ವೃಂದದ ಪರಿಷ್ಕೃತ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿರುವುದಕ್ಕೆ ಸ್ವೀಕೃತವಾಗಿರುವ ಮನವಿ/ಆಕ್ಷೇಪಣೆಗಳನ್ನು ಪರಿಶೀಲಿಸಿ ಇತ್ಯರ್ಥಪಡಿಸಲು ತಜ್ಞರ ಸಮಿತಿಯನ್ನು ರಚಿಸುವ ಬಗ್ಗೆ.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 73 ಎಸ್‌ಆರ್‌ಎಸ್ 2018, ಬೆಂಗಳೂರು, ದಿನಾಂಕ: 08.08.2018

ಓದಲಾಗಿದೆ:
1) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 182 ಸೇನೆನಿ 2011, ದಿನಾಂಕ:06.05.2017
2) ಸುತ್ತೋಲೆ ಸಂಖ್ಯೆ: ಮುಕಾ/500/2018, ದಿನಾಂಕ:13.04.2018.
3) ಸುತ್ತೋಲೆ ಸಂಖ್ಯೆ: ಸಿಆಸುಇ 442 ಸೇನೆನಿ 2018, ದಿನಾಂಕ:08.06.2018.

603
23.8.18

ಪ್ರಸ್ತಾವನೆ :

ಮಾನ್ಯ ಸರ್ವೋಚ್ಚ ನ್ಯಾಯಾಲಯವು ಶ್ರೀ ಬಿ.ಕೆ. ಪವಿತ್ರ ಮತ್ತಿತರರು ಪ್ರಕರಣದ ಸಿವಿಲ್ ಅಪೀಲು ಸಂಖ್ಯೆ: 2368/2011ರಲ್ಲಿ ದಿನಾಂಕ:09.02.2017ರಂದು ನೀಡಿರುವ ತೀರ್ಪನ್ನು ಅನುಷ್ಠಾನಗೊಳಿಸಲು ಮೇಲೆ (1)ರಲ್ಲಿ ಓದಲಾದ ದಿನಾಂಕ:06.05.2017ರ ಸರ್ಕಾರದ ಆದೇಶದಲ್ಲಿ ವಿವರವಾದ ಮಾರ್ಗಸೂಚಿಗಳನ್ನು ನೀಡಲಾಗಿದೆ.

2) ನಂತರ, ಹೀಗೆ ಪ್ರಕಟಿಸಲಾದ ಪರಿಷ್ಕೃತ ಅಂತಿಮ ಜೇಷ್ಠತಾ ಪಟ್ಟಿಗಳಲ್ಲಿ ನ್ಯೂನ್ಯತೆಗಳು/ಲೋಪಗಳು ಕಂಡುಬಂದಲ್ಲಿ ಅವುಗಳನ್ನು ನಿಯಮಾನುಸಾರ ಪರಿಶೀಲಿಸಿ ಸರಿಪಡಿಸಿ ತತ್ಪರಿಣಾಮವಾದ ಕ್ರಮವನ್ನು ಜರುಗಿಸುವಂತೆ ಮೇಲೆ (2)ರಲ್ಲಿ ಓದಲಾದ ದಿನಾಂಕ:13.04.2018ರ ಸುತ್ತೋಲೆಯಲ್ಲಿ ತಿಳಿಸಲಾಗಿದೆ.

**3) ಮುಂದುವರೆದು, ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶದನ್ವಯ ಪರಿಷ್ಕರಿಸಿ ಪ್ರಕಟಿಸಲಾದ ಜೇಷ್ಠತಾ ಪಟ್ಟಿ/ಮುಂಬಡ್ತಿ ಮತ್ತು ಹಿಂಬಡ್ತಿ ಆದೇಶಗಳಿಗೆ ಸಂಬಂಧಿಸಿದಂತೆ ಅಧಿಕಾರಿ/ನೌಕರರು ಸಲ್ಲಿಸಿರುವ ಆಕ್ಷೇಪಣೆಗಳನ್ನು ಸರ್ಕಾರವು ಆಗಿಂದಾಗ್ಗೆ ನೀಡಿರುವ ಸೂಚನೆ/ಮಾರ್ಗಸೂಚನೆಗಳನ್ವಯ ನಿಯಮಾನುಸಾರ ಕೂಲಂಕಷವಾಗಿ ಪರಿಶೀಲಿಸಿ ದಿನಾಂಕ:20.06.02018ರೊಳಗಾಗಿ ತಪ್ಪದೇ ಇತ್ಯರ್ಥಗೊಳಿಸುವಂತೆ ಮೇಲೆ (3)ರಲ್ಲಿ ಓದಲಾದ ಸುತ್ತೋಲೆಯಲ್ಲಿ ಸೂಚನೆಗಳನ್ನು ನೀಡಲಾಗಿದೆ.**

4) 2017ರ ಅಧಿನಿಯಮವನ್ನು ಅನುಷ್ಠಾನಗೊಳಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳು ವಿವಿಧ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಧಿಕಾರಿ/ನೌಕರರ ಸಂಘಟನೆಗಳೊಂದಿಗೆ ದಿನಾಂಕ: 1.8.2018ರಂದು ನಡೆಸಿದ ಸಭೆಯಲ್ಲಿ ಬಿ.ಕೆ. ಪವಿತ್ರ ಪ್ರಕರಣದನ್ವಯ ವಿವಿಧ ಇಲಾಖೆಗಳು ಪ್ರಕಟಿಸಿರುವ ಪರಿಷ್ಕೃತ ಜೇಷ್ಠತಾ ಪಟ್ಟಿಯಲ್ಲಿ ಹಲವಾರು ನ್ಯೂನ್ಯತೆಗಳು/ಲೋಪಗಳು ಕಂಡುಬಂದಿದ್ದು ಅವುಗಳನ್ನು ಸರಿಪಡಿಸುವಂತೆ ಮನವಿಗಳನ್ನು ಸಲ್ಲಿಸಿದ್ದಾಗ್ಯೂ ಸಹ ಸಂಬಂಧಿಸಿದ ಅಧಿಕಾರಿಗಳು/ಸಕ್ಷಮ ಪ್ರಾಧಿಕಾರಿಗಳು ಸರ್ಕಾರದಿಂದ ಹೊರಡಿಸಲಾದ ಸೂಚನೆ, ನಿರ್ದೇಶನಗಳನ್ನು ಪಾಲಿಸದೆ, ಆಕ್ಷೇಪಣೆಗಳನ್ನು ಪರಿಗಣಿಸದೆ ಇರುವುದರಿಂದ ತಮ್ಮ ಸಮುದಾಯಕ್ಕೆ ಅನ್ಯಾಯವಾಗಿದೆಯೆಂದು ಮಾನ್ಯ ಮುಖ್ಯಮಂತ್ರಿಯವರ ಗಮನಕ್ಕೆ ತಂದಿರುತ್ತಾರೆ.

5) ಆದುದರಿಂದ, ಈಗಾಗಲೇ ಪ್ರಕಟಿಸಲಾದ ಜೇಷ್ಠತಾ ಪಟ್ಟಿಗಳಲ್ಲಿ ನ್ಯೂನ್ಯತೆಗಳು/ಲೋಪಗಳನ್ನು ಸರಿಪಡಿಸುವಂತೆ ಕೋರಿ ನೌಕರರು ಸಲ್ಲಿಸಿರುವ ಆಕ್ಷೇಪಣೆಗಳನ್ನು ನಿಯಮಾನುಸಾರ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿ ಸೂಕ್ತ ಸಲಹೆ/ಅಭಿಪ್ರಾಯವನ್ನು ನೀಡಲು ಈ ಕೆಳಕಂಡ ಸದಸ್ಯರನ್ನೊಳಗೊಂಡ ಸಮಾಲೋಚಕರ ಸಮಿತಿಯನ್ನು ರಚಿಸಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ, ಈ ಆದೇಶ

..2..

ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಶ್ರೀ ಬಿ.ಕೆ. ಪವಿತ್ರ ಪ್ರಕರಣದಲ್ಲಿ ನೀಡಿರುವ ತೀರ್ಪಿನನ್ವಯ ಪ್ರಕಟಿಸಲಾದ ಪರಿಷ್ಕೃತ ಜೇಷ್ಠತಾ ಪಟ್ಟಿಗಳಲ್ಲಿ ಕಂಡುಬಂದ ನ್ಯೂನ್ಯತೆಗಳು/ಲೋಪಗಳನ್ನು ಸರಿಪಡಿಸುವಂತೆ ಕೋರಿ ಅಧಿಕಾರಿ/ನೌಕರರು ಸಲ್ಲಿಸಿರುವ/ಸಲ್ಲಿಸುವ ಆಕ್ಷೇಪಣೆಗಳನ್ನು ದಾಖಲೆಗಳೊಂದಿಗೆ ಕೂಲಂಕಷವಾಗಿ ನಿಯಮಾನುಸಾರ ಪರಿಶೀಲಿಸಿ ಸೂಕ್ತ ಸಲಹೆ / ಅಭಿಪ್ರಾಯವನ್ನು ನೀಡಲು ಈ ಕೆಳಕಂಡ ಸದಸ್ಯರನ್ನೊಳಗೊಂಡ ಸಮಾಲೋಚಕರ ಸಮಿತಿಯನ್ನು ರಚಿಸಿ ಆದೇಶಿಸಿದೆ:

(i) ಶ್ರೀ ಅಬ್ದುಲ್ ಖದೀರ್, ಸರ್ಕಾರದ ವಿಶೇಷ ಕಾರ್ಯದರ್ಶಿ (ನಿವೃತ್ತ)

(ii) ಶ್ರೀ ಯು. ಚಂದ್ರ ನಾಯಕ್, ಕಾರ್ಯದರ್ಶಿ, ಕೇಂದ್ರ ಪರಿಹಾರ ಸಮಿತಿ, ಸಮಾಜ ಕಲ್ಯಾಣ ಇಲಾಖೆ

(iii) ಶ್ರೀ ಪಿ. ರಾಮನಾಥ್, ಸರ್ಕಾರದ ಉಪ ಕಾರ್ಯದರ್ಶಿ (ನಿವೃತ್ತ)

(iv) ಶ್ರೀ ದೇವರಾಜು, ಸರ್ಕಾರದ ಉಪ ಕಾರ್ಯದರ್ಶಿ (ನಿವೃತ್ತ)

ಅಧಿಕಾರಿ/ನೌಕರರಿಂದ ಪರಿಷ್ಕೃತ ಅಂತಿಮ ಜೇಷ್ಠತಾ ಪಟ್ಟಿಗಳಿಗೆ ಸಂಬಂಧಿಸಿದಂತೆ ಸ್ವೀಕೃತವಾದ ಮನವಿಗಳನ್ನು ಆಯಾ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಯವರು ಮನವಿಗಳಲ್ಲಿನ ಅಂಶಗಳಿಗೆ ಕಂಡಿಕೆವಾರು ಷರಾ/ಟಿಪ್ಪಣಿಯನ್ನು ಪೂರಕ ದಾಖಲೆಗಳೊಂದಿಗೆ ಸಮಾಲೋಚಕರ ಸಮಿತಿಗೆ ಸಲ್ಲಿಸುವುದು.

ಸಮಿತಿಯು ಅಧಿಕಾರಿ/ನೌಕರರ ಮನವಿ/ಆಕ್ಷೇಪಣೆಗಳನ್ನು ಇಲಾಖೆಗಳು ನೀಡಿರುವ ಕಂಡಿಕೆವಾರು ಷರಾ/ಟಿಪ್ಪಣಿಗಳನ್ನು ದಾಖಲೆಗಳೊಂದಿಗೆ ನಿಯಮಾನುಸಾರ ಪರಿಶೀಲಿಸಿ, ನಿರ್ದಿಷ್ಟ ಅಭಿಪ್ರಾಯ/ಸಲಹೆಯನ್ನು ಆದಷ್ಟು ಜಾಗ್ರತೆ ಸಂಬಂಧಿಸಿದ ಇಲಾಖೆಗಳಿಗೆ/ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ (ಸೇವಾ ನಿಯಮಗಳು) ಕಳುಹಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Gayathri M.R
08/08/18

(ಗಾಯತ್ರಿ ಎಂ.ಆರ್.)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು-1)

ಇವರಿಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಲು ಹಾಗೂ 25 ಪ್ರತಿಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಕಳುಹಿಸಲು ಕೋರಿದೆ.

ಪ್ರತಿ:

1) ಪ್ರಧಾನ ಮಹಾಲೇಖಪಾಲರು (ಜಿ &ಎಸ್‌ಎಸ್‌ಎ) ಆಡಿಟ್ ಭವನ, ಹೊಸ ಕಟ್ಟಡ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-1.

2) ಪ್ರಧಾನ ಮಹಾಲೇಖಪಾಲರು (ಇಆರ್&ಎಸ್ಎ) ಆಡಿಟ್ ಭವನ, ಹೊಸ ಕಟ್ಟಡ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-1.
3) ಪ್ರಧಾನ ಮಹಾಲೇಖಪಾಲರು (ಎ& ಇ) ಮುಖ್ಯ ಕಟ್ಟಡ, ಬೆಂಗಳೂರು-01.
4) ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು/ಕಾರ್ಯದರ್ಶಿಯವರು.
5) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
6) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಯವರು.
7) ಎಲ್ಲಾ ಜಿಲ್ಲಾಧಿಕಾರಿಗಳು/ಇಲಾಖಾ ಮುಖ್ಯಸ್ಥರು/ಜಿಲ್ಲಾ ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು/ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು.
8) ಶ್ರೀ ಅಬ್ದುಲ್ ಖದೀರ್, ಸರ್ಕಾರದ ವಿಶೇಷ ಕಾರ್ಯದರ್ಶಿ (ನಿವೃತ್ತ), ನಂ. 158/1, 1ನೇ ಮುಖ್ಯ ರಸ್ತೆ, ಐ.ಟಿ.ಸಿ. ಕಾಲೋನಿ, ಜೀವನಹಳ್ಳಿ, ಕಾಕ್ಸ್ ಟೌನ್, ಬೆಂಗಳೂರು – 560005.
9) ಶ್ರೀ ಯು. ಚಂದ್ರ ನಾಯಕ್, ಕಾರ್ಯದರ್ಶಿ, ಕೇಂದ್ರ ಪರಿಹಾರ ಸಮಿತಿ, ಮಾಗಡಿ ಮುಖ್ಯ ರಸ್ತೆ, ವಿಜಯನಗರ, ಸುಮನಹಳ್ಳಿ, ಬೆಂಗಳೂರು – 560091.
10) ಶ್ರೀ ಪಿ. ರಾಮನಾಥ್, ಸರ್ಕಾರದ ಉಪ ಕಾರ್ಯದರ್ಶಿ (ನಿವೃತ್ತ), ಪಣ್ಯಮ್, ನಂ. 419, 8ನೇ ಕ್ರಾಸ್, 4ನೇ ಮೈನ್, 2ನೇ ಬ್ಲಾಕ್, ಆರ್.ಟಿ. ನಗರ, ಬೆಂಗಳೂರು – 560032.
11) ಶ್ರೀ ದೇವರಾಜು, ಸರ್ಕಾರದ ಉಪ ಕಾರ್ಯದರ್ಶಿ (ನಿವೃತ್ತ), ನಂ. 142, 19ನೇ 'ಬಿ' ಕ್ರಾಸ್, 17ನೇ ಮೈನ್, 3ನೇ ಸೆಕ್ಟರ್, ಹೆಚ್.ಎಸ್.ಆರ್. ಲೇಔಟ್, ಬೆಂಗಳೂರು – 560102.
12) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ.
13) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
14) ಸರ್ಕಾರದ ಅಧೀನ ಕಾರ್ಯದರ್ಶಿ, ಸಿ.ಆ.ಸು.ಇ. (ಲೆಕ್ಕಪತ್ರ).
15) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಕಾಲೇಜು ಶಿಕ್ಷಣ ಆಯುಕ್ತರ
ಆಪ್ತ ಶಾಖೆ
ಸಂಖ್ಯೆ..........
ದಿನಾಂಕ 06 SEP 2018

CAO

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 73 ಎಸ್‌ಆರ್‌ಎಸ್ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ: 5.9.2018

## ಸುತ್ತೋಲೆ

**ವಿಷಯ:** ಬಿ.ಕೆ ಪವಿತ್ರ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿರುವ ತೀರ್ಪಿನನ್ವಯ ಪ್ರಕಟಿಸಲಾದ ರಾಜ್ಯದ ಎಲ್ಲಾ ಇಲಾಖೆಗಳ ಎಲ್ಲಾ ವೃಂದಗಳ ಪರಿಷ್ಕೃತ ಜೇಷ್ಠತಾ ಪಟ್ಟಿಗಳಿಗೆ ಸಂಬಂಧಿಸಿದಂತೆ ಸ್ವೀಕೃತವಾಗಿರುವ ಮನವಿ / ಆಕ್ಷೇಪಣೆಗಳನ್ನು ಪರಿಶೀಲಿಸಿ ಇತ್ಯರ್ಥಪಡಿಸಲು ತಜ್ಞರ ಸಮಿತಿಯನ್ನು ರಚಿಸುವ ಬಗ್ಗೆ.

**ಉಲ್ಲೇಖ:** ದಿನಾಂಕ 08.08.2018ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 73 ಎಸ್‌ಆರ್‌ಎಸ್ 2018.

CAO

668
06.09.18
ಆಪ್ತ ಶಾಖೆ

–0–0–

1. ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ದಿನಾಂಕ 08.08.2018ರ ಉಲ್ಲೇಖಿತ ಸರ್ಕಾರದ ಆದೇಶದಲ್ಲಿ ಬಿ.ಕೆ ಪವಿತ್ರ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿರುವ ತೀರ್ಪಿನನ್ವಯ ಪ್ರಕಟಿಸಲಾದ ರಾಜ್ಯದ ಎಲ್ಲಾ ಇಲಾಖೆಗಳ ಎಲ್ಲಾ ವೃಂದಗಳ ಪರಿಷ್ಕೃತ ಜೇಷ್ಠತಾ ಪಟ್ಟಿಗಳಿಗೆ ಸಂಬಂಧಿಸಿದಂತೆ ಸ್ವೀಕೃತವಾಗಿರುವ ಮನವಿ / ಆಕ್ಷೇಪಣೆಗಳನ್ನು ಪರಿಶೀಲಿಸಿ ಇತ್ಯರ್ಥಪಡಿಸಲು ತಜ್ಞರ ಸಮಿತಿಯನ್ನು ರಚಿಸಲಾಗಿರುತ್ತದೆ.

2. ಸಮಾಲೋಚಕರ ಸಮಿತಿಗೆ ಮನವಿಗಳನ್ನು ಸಲ್ಲಿಸುವ ಕಾರ್ಯವಿಧಾನಕ್ಕೆ ಸಂಬಂಧಿಸಿದಂತೆ ಮೇಲ್ಕಂಡ ಆದೇಶ ಭಾಗದ 2ನೇ ಕಂಡಿಕೆಯಲ್ಲಿ ಈ ಕೆಳಕಂಡ ಕಾರ್ಯವಿಧಾನವನ್ನು ನಿಗದಿಪಡಿಸಲಾಗಿದೆ:

> ***"ಅಧಿಕಾರಿ / ನೌಕರರಿಂದ ಪರಿಷ್ಕೃತ ಅಂತಿಮ ಜೇಷ್ಠತಾ ಪಟ್ಟಿಗಳಿಗೆ ಸಂಬಂಧಿಸಿದಂತೆ ಸ್ವೀಕೃತವಾದ ಮನವಿಗಳನ್ನು, ಆಯಾ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಯವರು ಮನವಿಗಳಲ್ಲಿನ ಅಂಶಗಳಿಗೆ ಕಂಡಿಕೆವಾರು ಷರಾ / ಟಿಪ್ಪಣಿಯನ್ನು ಪೂರಕ ದಾಖಲೆಗಳೊಂದಿಗೆ ಸಮಾಲೋಚಕರ ಸಮಿತಿಗೆ ಸಲ್ಲಿಸುವುದು"***

3. ಆದಾಗ್ಯೂ, ಮನವಿಗಳನ್ನು ಸಮಾಲೋಚಕರ ಸಮಿತಿಗೆ ಸಲ್ಲಿಸುವಲ್ಲಿ ಸಂಬಂಧಪಟ್ಟವರು ಏಕರೂಪದ ಕಾರ್ಯವಿಧಾನವನ್ನು ಪಾಲಿಸುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಏಕರೂಪದ ಕಾರ್ಯವಿಧಾನವನ್ನು ಪಾಲಿಸದೇ ಇರುವುದರಿಂದ ಆಗುವ ವಿಳಂಬವನ್ನು ತಪ್ಪಿಸುವ ಸಲುವಾಗಿ ಸದರಿ ಕಾರ್ಯವಿಧಾನದ ಬಗ್ಗೆ ಸ್ಪಷ್ಟೀಕರಿಸುವುದು ಅಗತ್ಯವೆಂದು ಭಾವಿಸಿ, ಈ ಕೆಳಕಂಡಂತೆ ಸೂಚನೆಗಳನ್ನು ನೀಡಿದೆ:

(1) ಜೇಷ್ಠತಾ ಪಟ್ಟಿಗಳನ್ನು ಯಾವ ನೇಮಕಾತಿ ಪ್ರಾಧಿಕಾರ ಪ್ರಕಟಿಸಿದೆಯೋ, ಅದೇ ನೇಮಕಾತಿ ಪ್ರಾಧಿಕಾರಕ್ಕೆ ಮನವಿಗಳನ್ನು ಸಲ್ಲಿಸುವುದು;

...2/-

(2) ಸಂಬಂಧಿಸಿದ ನೇಮಕಾತಿ ಪ್ರಾಧಿಕಾರ ಕ್ಷೇತ್ರ ಇಲಾಖೆಯಲ್ಲಿನ ಪ್ರಾಧಿಕಾರವಾಗಿದ್ದಲ್ಲಿ, ಮನವಿಗಳಲ್ಲಿನ ಅಂಶಗಳನ್ನು ಪರಿಶೀಲಿಸಿ, ಅಂಶವಾರು / ಕಂಡಿಕೆವಾರು ತನ್ನ ಪ್ರತಿಕ್ರಿಯೆಯನ್ನು, ಪೂರಕ ದಾಖಲೆಗಳೊಂದಿಗೆ, ಕರ್ನಾಟಕ ಸರ್ಕಾರ ಸಚಿವಾಲಯದ ಸಂಬಂಧಿಸಿದ ಆಡಳಿತ ಇಲಾಖೆಗೆ ಕಳುಹಿಸುವುದು. ಅದನ್ನು ಸಂಬಂಧಿಸಿದ ಆಡಳಿತ ಇಲಾಖೆಯು ಪರಿಶೀಲಿಸಿ, ಅಂಶವಾರು / ಕಂಡಿಕೆವಾರು ತನ್ನ ಪ್ರತಿಕ್ರಿಯೆಯನ್ನು ನಮೂದಿಸಿ, ಸಮಾಲೋಚಕರ ಸಮಿತಿಗೆ ಕಳುಹಿಸುವುದು. **[ಕೊಠಡಿ ಸಂಖ್ಯೆ220, 2ನೇ ಮಹಡಿ, (ಕ್ಯಾಂಟೀನಿನ ಮೇಲ್ಭಾಗದಲ್ಲಿ) ವಿಕಾಸಸೌಧ, ಬೆಂಗಳೂರು-560 001]**

(3) ಸಂಬಂಧಿಸಿದ ನೇಮಕಾತಿ ಪ್ರಾಧಿಕಾರ ಕರ್ನಾಟಕ ಸರ್ಕಾರ ಸಚಿವಾಲಯದ ಇಲಾಖೆಯಲ್ಲಿನ ಪ್ರಾಧಿಕಾರವಾಗಿದ್ದಲ್ಲಿ, ಮನವಿಗಳಲ್ಲಿನ ಅಂಶಗಳನ್ನು ಆ ಇಲಾಖೆಯು ಪರಿಶೀಲಿಸಿ, ಅಂಶವಾರು / ಕಂಡಿಕೆವಾರು ತನ್ನ ಪ್ರತಿಕ್ರಿಯೆಯನ್ನು, ಪೂರಕ ದಾಖಲೆಗಳೊಂದಿಗೆ, ಸಮಾಲೋಚಕರ ಸಮಿತಿಗೆ ಕಳುಹಿಸುವುದು.

(4) ಯಾವುದೇ ಸಂದರ್ಭದಲ್ಲಿ ಮನವಿಗಳನ್ನು ನೇರವಾಗಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಅಥವಾ ಸಮಾಲೋಚಕರ ಸಮಿತಿಗೆ ಕಳುಹಿಸತಕ್ಕದ್ದಲ್ಲ.

4. **ಆದುದರಿಂದ, ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಸರ್ಕಾರದ ಕಾರ್ಯದರ್ಶಿಗಳು ತಮ್ಮ ಆಡಳಿತ ವ್ಯಾಪ್ತಿಗೊಳಪಡುವ ಕ್ಷೇತ್ರೀಯ ಇಲಾಖೆಗಳು / ಸ್ವಾಯತ್ತ ಸಂಸ್ಥೆಗಳು/ ವಿಶ್ವವಿದ್ಯಾಲಯಗಳು/ ಸಾರ್ವಜನಿಕ ಉದ್ದಿಮೆ/ ಆಯೋಗ/ನಿಗಮ/ ಮಂಡಳಿಗಳು ಮತ್ತು ಸರ್ಕಾರದಿಂದ ಅನುದಾನ ಪಡೆಯುವ ಎಲ್ಲಾ ಸಂಸ್ಥೆಗಳಿಗೂ ಈ ಕುರಿತು ಕೂಡಲೇ ಸೂಚನೆ ನೀಡುವಂತೆ ತಿಳಿಸಲಾಗಿದೆ.**

Gayathri M.R
05.09.18
(ಗಾಯತ್ರಿ.ಎಂ.ಆರ್.)
ಸರ್ಕಾರದ ಕಾರ್ಯದರ್ಶಿ-3(ಪ್ರ)
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-ವಿಶೇಷಕೋಶ)

**ಇವರಿಗೆ:** ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇದನ್ನು ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಸಿಆಸುಇ ಸೇವಾನಿಯಮಗಳು-ವಿಶೇಷಕೋಶ, ಕೊಠಡಿ ಸಂಖ್ಯೆ: 32, ವಿಧಾನಸೌಧ, ಬೆಂಗಳೂರು,ಇವರಿಗೆ ಒದಗಿಸಬೇಕೆಂದು ಕೋರಿದೆ.

**ಪ್ರತಿಯನ್ನು:**

1. ಪ್ರಧಾನ ಮಹಾಲೇಖಪಾಲರು, (ಜಿ &ಎಸ್‌ಎಸ್‌ಎ), (ಇ &ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು
2. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು
4. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರು
5. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು / ಕಾರ್ಯದರ್ಶಿಯವರು
6. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
7. ರಾಜ್ಯಪಾಲರ ಅಪರ ಕಾರ್ಯದರ್ಶಿಯವರು

8. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯಮಾರ್ಗ, ಚಾಣಕ್ಯಪುರಿ, ನವದೆಹಲಿ-110021
9. *ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ / ಪರಿಷತ್ತು, ಬೆಂಗಳೂರು
10. *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು
11. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು
12. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
13. *ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, 6 ಮತ್ತು 7ನೇ ಮಹಡಿ, ಕಂದಾಯಭವನ, ಕೆ.ಜಿ.ರಸ್ತೆ, ಬೆಂಗಳೂರು- 560 009.
14. *ನಿಬಂಧಕರು, ಕರ್ನಾಟಕ ಮೇಲ್ಮನವಿ ನ್ಯಾಯಾಧೀಕರಣ, ಬಹುಮಹಡಿ ಕಟ್ಟಡ, ಬೆಂಗಳೂರು
15. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು
16. ಎಲ್ಲಾ ಆರಕ್ಷಕ ಮಹಾ ನಿರೀಕ್ಷಕರು ಮತ್ತು ಉಪ ಆರಕ್ಷಕ ಮಹಾ ನಿರೀಕ್ಷಕರು
17. ಎಲ್ಲಾ ಇಲಾಖಾ ಮುಖ್ಯಸ್ಥರು
18. ಎಲ್ಲಾ ಪ್ರಾದೇಶಿಕ ಆಯುಕ್ತರು / ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು / ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ / ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು
19. ಸರ್ಕಾರದ ಎಲ್ಲಾ ವಿಶೇಷ / ಅಪರ / ಜಂಟಿ / ಉಪ / ಅಧೀನ ಕಾರ್ಯದರ್ಶಿಗಳು
20. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು
21. ಶಾಖಾ ರಕ್ಷಾ ಕಡತ / ಅಧಿಕ ಪ್ರತಿಗಳು

(* ಮುಖ ಪತ್ರದೊಂದಿಗೆ)

Gayathri. M.K
05/08/18

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 277 ಸೇನೆನಿ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ: 01.09.2018.

## ಸುತ್ತೋಲೆ

**ವಿಷಯ:** ಸಿವಿಲ್ ಅಪೀಲ್ ಸಂಖ್ಯೆ: 2368/2011- ಬಿ.ಕೆ. ಪವಿತ್ರ ಮತ್ತು ಇತರರು ವಿರುದ್ಧ ಯೂನಿಯನ್ ಆಫ್ ಇಂಡಿಯಾ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿರುವ ತೀರ್ಪಿನ ಹಿನ್ನೆಲೆಯಲ್ಲಿ ನಿವೃತ್ತಿ ವೇತನವನ್ನು ನಿಗದಿಪಡಿಸುವ ಬಗ್ಗೆ.

**ಉಲ್ಲೇಖ:**
(1) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 182 ಸೇನೇನಿ 2017 ದಿನಾಂಕ: 06.05.2017.
(2) ಸುತ್ತೋಲೆ ಸಂಖ್ಯೆ: ಡಿಪಿಎಆರ್ 277 ಎಸ್ಆರ್ಆರ್ 2018 ದಿನಾಂಕ: 08.06.2018.
(3) ಸುತ್ತೋಲೆ ಸಂಖ್ಯೆ: ಸಿಆಸುಇ 277 ಸೇನೇನಿ 2018 ದಿನಾಂಕ: 06.08.2018.
(4) ಸುತ್ತೋಲೆ ಸಂಖ್ಯೆ: ಡಿಪಿಎಆರ್ 442 ಸೇನೇನಿ 2018 ದಿನಾಂಕ: 08.06.2018.
(5) ಸುತ್ತೋಲೆ ಸಂಖ್ಯೆ: ಡಿಪಿಎಆರ್ 277 ಎಸ್ಆರ್ಆರ್ 2018 ದಿನಾಂಕ: 18.08.2018.

*~*~*~*~*

(1) ಸಿವಿಲ್ ಅಪೀಲ್ ಸಂಖ್ಯೆ: 2368/2011- ಶ್ರೀ ಬಿ.ಕೆ.ಪವಿತ್ರ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ದಿನಾಂಕ: 09.02.2017 ರಂದು ನೀಡಿರುವ ತೀರ್ಪಿನ ಹಿನ್ನೆಲೆಯಲ್ಲಿ ಉಲ್ಲೇಖಿತ ಸರ್ಕಾರದ ಆದೇಶ/ ಸುತ್ತೋಲೆಗಳಲ್ಲಿನ ಮಾರ್ಗಸೂಚಿ/ ಸೂಚನೆಗಳಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಎಲ್ಲಾ ವೃಂದಗಳ ಜೇಷ್ಠತಾ ಪಟ್ಟಿಯನ್ನು ಪರಿಷ್ಕರಿಸಿ ಅದರನ್ವಯ ತತ್ಪರಿಣಾಮದ ಕ್ರಮಗಳನ್ನು ಕೈಗೊಳ್ಳುವಂತೆ ತಿಳಿಸಲಾಗಿರುತ್ತದೆ.

(2) ಈ ಮಧ್ಯೆ ಕರ್ನಾಟಕ (ರಾಜ್ಯದ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ) ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿರುವ ಸರ್ಕಾರಿ ನೌಕರರಿಗೆ ತತ್ಪರಿಣಾಮವಾದ ಜೇಷ್ಠತೆಯನ್ನು ವಿಸ್ತರಿಸುವ ಅಧಿನಿಯಮ, 2017 (Act No: 21/2018) ದಿನಾಂಕ: 23.06.2018ರಿಂದ ಜಾರಿಗೆ ಬಂದಿರುತ್ತದೆ.

(3) ಮೇಲ್ಕಂಡ ಅಧಿನಿಯಮವನ್ನು ಪ್ರಶ್ನಿಸಿ ಹಲವು ರಿಟ್ ಅರ್ಜಿಗಳು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ದಾಖಲಾಗಿದ್ದು, ಸದರಿ ಪ್ರಕರಣಗಳನ್ನು ಬಿ.ಕೆ.ಪವಿತ್ರ ಪ್ರಕರಣಕ್ಕೆ ಸಂಬಂಧಿಸಿದಂತೆ ಬಾಕಿಯಿರುವ ಎಂ.ಎ.ಸಂಖ್ಯೆ: 1151/2018ರೊಂದಿಗೆ ಒಟ್ಟುಗೂಡಿಸಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ವಿಚಾರಣೆ ನಡೆಸುತ್ತಿದೆ.

.........2

(4) ಶ್ರೀ ಬಿ. ಕೆ. ಪವಿತ್ರ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಛ ನ್ಯಾಯಾಲಯವು ನೀಡಿರುವ ತೀರ್ಪಿನನ್ವಯ ಮುಂಬಡ್ತಿ/ ಹಿಂಬಡ್ತಿಗೊಳಗಾಗಿ ವಯೋನಿವೃತ್ತಿ ಹೊಂದಿರುವ ಅಧಿಕಾರಿ/ ನೌಕರರಿಗೆ ನಿವೃತ್ತಿ ವೇತನವನ್ನು ನಿಗದಿಪಡಿಸಿ ಇದುವರೆವಿಗೂ ನಿವೃತ್ತಿ ಸೌಲಭ್ಯಗಳನ್ನು ಬಿಡುಗಡೆ ಮಾಡಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ಹಿನ್ನೆಲೆಯಲ್ಲಿ ಈ ಅಂಶದ ಬಗ್ಗೆ ಮಾನ್ಯ ಅಡ್ವೋಕೇಟ್ ಜನರಲ್‌ರವರು, ಕಾನೂನು ಇಲಾಖೆ ಹಾಗೂ ಆರ್ಥಿಕ ಇಲಾಖೆಗಳ ಸಹಮತಿಯನ್ನು ಪಡೆದು, ಶ್ರೀ ಬಿ.ಕೆ. ಪವಿತ್ರ ಪ್ರಕರಣದ ನಂತರ ನಿವೃತ್ತಿ ಹೊಂದುವ/ ಹೊಂದಿರುವ ಅಧಿಕಾರಿ/ ನೌಕರರಿಗೆ ನಿವೃತ್ತಿ ಸೌಲಭ್ಯಗಳನ್ನು ಬಿಡುಗಡೆ ಮಾಡುವುದಕ್ಕೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಸೂಚನೆಗಳನ್ನು ನೀಡಲಾಗಿದೆ:

> "ಶ್ರೀ ಬಿ.ಕೆ. ಪವಿತ್ರ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಛ ನ್ಯಾಯಾಲಯವು ದಿನಾಂಕ: 09.02.2017ರಂದು ನೀಡಿರುವ ತೀರ್ಪಿನನ್ವಯ ಇನ್ನು ನಿವೃತ್ತಿ ವೇತನ ನಿಗದಿ ಮಾಡದಿರುವ ಪ್ರಕರಣಗಳಲ್ಲಿ ಮಾತ್ರ, ಮುಂಬಡ್ತಿಗೊಂಡ ಅಧಿಕಾರಿ/ ನೌಕರರು ವಯೋನಿವೃತ್ತರಾದ ಪ್ರಕರಣಗಳಲ್ಲಿ ಮುಂಬಡ್ತಿ ಹೊಂದಿದ ಹುದ್ದೆಯಲ್ಲಿ ತಾತ್ಕಾಲಿಕ ನಿವೃತ್ತಿ ವೇತನವನ್ನು ನಿಗದಿಗೊಳಿಸಲು ಹಾಗೂ ಹಿಂಬಡ್ತಿಗೊಂಡು ವಯೋನಿವೃತ್ತರಾದ ಎಲ್ಲಾ ಅಧಿಕಾರಿ/ ನೌಕರರು ಹಿಂಬಡ್ತಿಗೊಳ್ಳುವುದಕ್ಕೆ ಮೊದಲು ಕರ್ತವ್ಯ ನಿರ್ವಹಿಸುತ್ತಿದ್ದ ಹುದ್ದೆಯಲ್ಲಿ ತಾತ್ಕಾಲಿಕ ನಿವೃತ್ತಿ ವೇತನವನ್ನು ನಿಗದಿಗೊಳಿಸಿ ಮಾನ್ಯ ಸರ್ವೋಚ್ಛ ನ್ಯಾಯಾಲಯವು ನೀಡುವ ಅಂತಿಮ ಆದೇಶದನ್ವಯ ಮುಂಬಡ್ತಿ/ ಹಿಂಬಡ್ತಿಯಿಂದ ಪಾವತಿಸಬೇಕಾದ ವ್ಯತ್ಯಾಸದ ಮೊತ್ತವನ್ನು ಡಿ.ಸಿ.ಆರ್.ಜಿ ಮೊತ್ತದಿಂದ ಕಡಿತಗೊಳಿಸಿ ನಿವೃತ್ತಿ ವೇತನವನ್ನು ಬಿಡುಗಡೆಮಾಡಲು ಅಗತ್ಯವಾದ **Undertaking** ಅನ್ನು ಮುಂಬಡ್ತಿ/ ಹಿಂಬಡ್ತಿಗೊಂಡು ವಯೋನಿವೃತ್ತಿ ಹೊಂದುವ/ ಹೊಂದಿರುವ ಅಧಿಕಾರಿ/ ನೌಕರರಿಂದ ಪಡೆದು ತಾತ್ಕಾಲಿಕ ನಿವೃತ್ತಿ ವೇತನವನ್ನು ನಿಗದಿಪಡಿಸಿ ಬಿಡುಗಡೆಮಾಡುವುದು".

(5) ಈ ಸೂಚನೆಗಳು ಎಲ್ಲಾ ಸ್ವಾಯತ್ತ ಸಂಸ್ಥೆಗಳು/ ಸ್ಥಳೀಯ ಸಂಸ್ಥೆಗಳು/ ವಿಶ್ವವಿದ್ಯಾಲಯಗಳು/ ಸಾರ್ವಜನಿಕ ಉದ್ದಿಮೆ/ ಆಯೋಗ/ ನಿಗಮ/ ಮಂಡಳಿಗಳು ಮತ್ತು ಸರ್ಕಾರದಿಂದ ಅನುದಾನ ಪಡೆಯುವ ಸಂಸ್ಥೆಗಳಿಗೂ ಅನ್ವಯವಾಗುತ್ತದೆ.

(6) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಸರ್ಕಾರದ ಕಾರ್ಯದರ್ಶಿಗಳು ತಮ್ಮ ಆಡಳಿತ ವ್ಯಾಪ್ತಿಗೊಳಪಡುವ ಎಲ್ಲಾ ಸ್ವಾಯತ್ತ ಸಂಸ್ಥೆಗಳು/ ಸ್ಥಳೀಯ ಸಂಸ್ಥೆಗಳು/ ವಿಶ್ವವಿದ್ಯಾಲಯಗಳು/ ಸಾರ್ವಜನಿಕ ಉದ್ದಿಮೆ/ ಆಯೋಗ/ ನಿಗಮ/ ಮಂಡಳಿಗಳು ಮತ್ತು ಸರ್ಕಾರದಿಂದ ಅನುದಾನ ಪಡೆಯುವ ಸಂಸ್ಥೆಗಳಿಗೆ ಈ ಕುರಿತು ಕೂಡಲೇ ಸೂಚನೆ ನೀಡುವಂತೆ ತಿಳಿಸಲಾಗಿದೆ.

(ಸಹಿ) 1/9/18
(ತ.ಮ. ವಿಜಯ ಭಾಸ್ಕರ್)
ಸರ್ಕಾರದ ಮುಖ್ಯ ಕಾರ್ಯದರ್ಶಿ

ಇವರಿಗೆ:
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು. ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ(ಸೇವಾ ನಿಯಮಗಳು-1) ಇವರ ಕಛೇರಿಗೆ ಒದಗಿಸುವುದು.

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-560 001.
2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-560 001.
3. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಬೆಂಗಳೂರು-560 001.
4. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
5. ಮಾನ್ಯ ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6. ಮಾನ್ಯ ಅಡ್ವೋಕೇಟ್ ಜನರಲ್‌ರವರು ಕರ್ನಾಟಕ ಸರ್ಕಾರ, ಉಚ್ಚ ನ್ಯಾಯಾಲಯದ ಕಟ್ಟಡಗಳ ಸಂಕೀರ್ಣ, ಡಾ॥ ಬಿ.ಆರ್. ಅಂಬೇಡ್ಕರ್ ರಸ್ತೆ, ಬೆಂಗಳೂರು.
7. ಮಾನ್ಯ ರಾಜ್ಯಪಾಲರ ವಿಶೇಷ ಕಾರ್ಯದರ್ಶಿಗಳು.
8. ಎಲ್ಲಾ ಇಲಾಖಾ ಮುಖ್ಯಸ್ಥರುಗಳು/ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು/ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳು/ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು.
9. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ ಕರ್ನಾಟಕ ವಿಧಾನ ಪರಿಷತ್ತು, ವಿಧಾನ ಸೌಧ, ಬೆಂಗಳೂರು-01.
10. * ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು-01.
12. * ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು-560 001.
13. * ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ. ರಸ್ತೆ, ಬೆಂಗಳೂರು.
14. * ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿಗಳ ಕಟ್ಟಡ, ಬೆಂಗಳೂರು-560 001.
15. ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಸೇವೆಗಳು), ವಿಧಾನ ಸೌಧ, ಬೆಂಗಳೂರು.
14. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

(* ಮುಖ ಪತ್ರದೊಂದಿಗೆ)

**ಈ ಸುತ್ತೋಲೆಯನ್ನು <u>http://172.19.1.185/svlivesearch/</u> ಮತ್ತು dpar.karnataka.gov.in/servicerules ರಲ್ಲಿ ಪಡೆಯಬಹುದಾಗಿದೆ.**